ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ದೈಹಿಕ ಶಿಕ್ಷಕರ ನೇಮಕಾತಿ

1001 - ಶ್ರೀ ಎಸ್.ಎಸ್. ಖಾದ್ರಿ (ಶಿಗ್ಗಾಂವ್) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ಒಬ್ಬ ದೈಹಿಕ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳುವಂತೆ ಸಂಘ ಸಂಸ್ಥೆಗಳ ವತಿಯಿಂದ ನಡೆಸುತ್ತಿರುವ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಒಬ್ಬ ದೈಹಿಕ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಬೇಕೆಂದು ಸರ್ಕಾರ ಆದೇಶಿಸಿದೆಯೇ?

ಆ) ಎಂದಿನಿಂದ ಈ ಕಾಯಿದೆ ಜಾರಿಗೆ ಬಂದಿದೆ?

ಇ) ಇದರಿಂದ ಸರ್ಕಾರ ಹಾಗೂ ಸಂಘ ಸಂಸ್ಥೆಗಳಲ್ಲಿ ತಾರತಮ್ಯ ಮಾಡಿದಂತೆ ಆಗುವುದಿಲ್ಲವೇ?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಆದೇಶವಿದೆ.

ಆ) 1971-72ರಿಂದಲೇ ಜಾರಿಗೆ ಬಂದಿದೆ.

ಇ) ದೈಹಿಕ ಶಿಕ್ಷಕರ ನೇಮಕಾತಿಗೆ ಸಂಘ ಸಂಸ್ಥೆಗಳು ನಡೆಸುವ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ನೇಮಕಕ್ಕೆ ಅವಕಾಶ ಇರುವುದರಿಂದ ತಾರತಮ್ಯದ ಪ್ರಶ್ನೆ ಉದ್ಭವಿಸುವುದಿಲ್ಲ.

ರಾಜ್ಯದಲ್ಲಿರುವ ಅಲ್ಪಸಂಖ್ಯಾತರ ವೈದ್ಯಕೀಯ ಹಾಗೂ ತಾಂತ್ರಿಕ ಹಾಗೂ ದಂತವೈದ್ಯ ಕಾಲೇಜುಗಳು

1003 - ಶ್ರೀ ಖಾದ್ರಿ ಎಸ್.ಎಸ್. (ಶಿಗ್ಗಾಂವ್) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ರಾಜ್ಯದಲ್ಲಿ ಇರುವ ಅಲ್ಪಸಂಖ್ಯಾತರ ವೈದ್ಯಕೀಯ ಕಾಲೇಜು, ತಾಂತ್ರಿಕ ಕಾಲೇಜು, ದಂತವೈದ್ಯ ಕಾಲೇಜು, ಫಾರ್ಮಸಿ ಕಾಲೇಜುಗಳ ಸಂಖ್ಯೆ ಎಷ್ಟು?

2. ಈ ಶಿಕ್ಷಣ ಸಂಸ್ಥೆಗಳು ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುತ್ತವೆ? ಇದರಲ್ಲಿ ಸಂಸ್ಥೆಯ ಕೋಟಾ ಎಷ್ಟು? ಅಲ್ಪಸಂಖ್ಯಾತರ ಕೋಟಾವೆಷ್ಟು? ಎನ್‌ಆರ್‌ಐ ಕೋಟಾವೆಷ್ಟು? (ಕಾಲೇಜುವಾರು ವಿವರ ನೀಡುವುದು)

ಡಾ|| ಎ.ಬಿ. ಮಾಲಕ ರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

1.	ವೈದ್ಯಕೀಯ ಕಾಲೇಜುಗಳು	5
	ದಂತ ಕಾಲೇಜುಗಳು	8
	ತಾಂತ್ರಿಕ ಕಾಲೇಜುಗಳು (ಇಂಜಿನಿಯರಿಂಗ್)	12
	ಫಾರ್ಮಸಿ ಕಾಲೇಜುಗಳು	5